24	ರಾಯಚೂರು	19444	10594	
25	ರಾಮನಗರ	6599	3108	
26	ಶಿವಮೊಗ್ಗ	9930	9612	
27	ತುಮಕೂರು	16764	11291	
28	ಉಡುಪಿ	4271	1987	
29	ಉತ್ತರ ಕನ್ನಡ	2387	4348	
30	ಯಾದಗಿರಿ	9778	4741	
	ಒಟ್ಟು	**334413**	**229979**	

ವಸತಿ ನಿಲಯಗಳನ್ನು ಮಂಜೂರು ಮಾಡುವುದು

527 (492) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ ಪ್ರತಿ ತಾಲ್ಲೂಕಿಗೆ ಎಷ್ಟು ವಸತಿ ನಿಲಯಗಳನ್ನು ಮಂಜೂರು ಮಾಡಲಾಗುವುದು; ವಿವರಗಳನ್ನು ನೀಡುವುದು;

ಇ) ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳ ಕೊರತೆಯಿಂದ ಸ್ಥಳೀಯ ಬಡ ಮಕ್ಕಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಊ) ಕೊಪ್ಪಳ ತಾಲ್ಲೂಕಿನಲ್ಲಿ ವಸತಿ ನಿಲಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಋ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಎಷ್ಟು ವಸತಿ ಶಾಲೆಗಳನ್ನು ಮಂಜೂರು ಮಾಡಲಾಗುವುದು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :-

ಅ) ಹೌದು

ಆ) ಆಯವ್ಯಯ ಲಭ್ಯತೆ, ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅವಶ್ಯಕತೆಯನ್ನು ಆಧರಿಸಿ, ಮಂಜೂರು ಮಾಡಲು ಪರಿಶೀಲಿಸಲಾಗುವುದು.

ಇ) ಕೆಲವು ಕಡೆ ತೊಂದರೆಯಾಗಿರುವುದು ಗಮನಕ್ಕೆ ಬಂದಿರುತ್ತದೆ.

ಈ) ಆಯವ್ಯಯವನ್ನು ಆಧರಿಸಿ, ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅವಶ್ಯಕತೆಯನ್ನು ಗಮನದಲ್ಲಿಟ್ಟುಕೊಂಡು, ವಿದ್ಯಾರ್ಥಿನಿಲಯ ಗಳನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು.

ಉ) ಹೌದು

ಊ) ಹೊಸ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವಾಗ ಈ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಪರಿಶೀಲಿಸಲಾಗುವುದು.

ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರಾತಿ

528 (493) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) :- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ಕೊಪ್ಪಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಹುಲಗಿ, ಬಂಡಿ ಹರ್ಲಾಪುರ, ಕಾತರಕಿ ಗುಡ್ಲಾನೂರು, ಬೋಚನಹಳ್ಳಿ